# ಅಪಾದಿತರನ್ನು ಕೂಡಲೆ ಬಂಧಿಸುವ ಕೆಲಸವಾಗಬೇಕು; ಜಿಲ್ಲಾ ಬಿಜೆಪಿ ಅಧ್ಯಕ್ಷ ಸುಭಾಷ್ ಪಾಟೀಲ



ಬೆಳಗಾವಿ: ಜಿಲ್ಲೆಯ ಸವದತ್ತಿ ಪೋಲಿಸ್ ಠಾಣೆಯುಲ್ಲಿ ದಾಖಲಾದ ಪ್ರಕರಣ 164/24 ರಲ್ಲಿ ನವೊದಿತ 7ಜನ ಅಪಾದಿತರನ್ನು ಕೂಡಲೆ ಬಂಧಿಸುವ ಹಾಗೂ ಈ ಪ್ರಕರಣದಲ್ಲಿ ಭಾಗಿಯಾದವರ ಮೇಲೆ ಕಠಿಣ ಶಿಕ್ಷೆ ಆಗುವ ರೀತಿಯುಲ್ಲಿ ವೊಕದ್ದವೆ ದಾಖಲಿಸುವಂತೆ ಆಗ್ರಹಿಸಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಸುಭಾಷ್ ಪಾಟೀಲ ನೇತೃತ್ವದಲ್ಲಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳಿಗೆ ಮನವಿ ಪತ್ರ ನೀಡಿ ಆಗ್ರಹಿಸಿದ್ದಾರೆ.

ನಗರದಲ್ಲಿರುವ ಪೋಲಿಸ್ ಭವನಕ್ಕೆ ಬುಧವಾರ ಬಿಜೆಪಿ ನಿಯೋಗ ತೆರಳಿ ಮನವಿ ನೀಡಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಸುಭಾಷ್ ಪಾಟೀಲ ಪತ್ರಿಕೆಯೊಂದಿಗೆ ಮಾತನಾಡಿ,

ಜಸವದತ್ತಿ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಬರುವ ಮುನವಳ್ಳಿ ಪಟ್ಟಣದಲ್ಲಿ ನಡೆದ ಲವ್ ಜೀಹಾದ ಪ್ರಕರಣದಲ್ಲಿ ದಲಿತ ಮಹಿಳೆಗೆ ಎಸಗಿರುವ ಗುರುತರವಾದ ಪ್ರಕರಣವನ್ನು ಪೋಲಿಸ್ ಇಲಾಖೆಯಿಂದ ದಾಖಲಿಸಿಕೊಂಡಿದ್ದಾರೆ. ಈ ಪ್ರಕರಣದಲ್ಲಿ ಲವ್ ಜೀಹಾದ್ ಮತಾತಂರ, ಲೈಂಗಿಕ ದೌರ್ಜನ್ಯ, ಅತ್ಯಾಚಾರ, ಮೊಸ, ವಂಚನೆ, ಜಾತಿ ನಿಂದನೆ, ಗೂಂಡಾಗಿರಿ ಹಾಗೂ ಇನ್ನು ಅನೇಕ ತೆರನಾದ ಅಪರಾಧವನ್ನು ಎಸಗಿದ ಅಪರಾಧಿ ರಫೀಕ್ ಭೇಪಾರಿಯ ಮೇಲೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಕೋಮು ಸೌಹಾರ್ದತೆಗೆ ದಕ್ಕೆ ತರುವದಲ್ಲದೆ ಸಮಾಜದ ಸ್ವಸ್ಥ ಹಾಳು ಮಾಡಿದ್ದು ಕೊಮುಗಲಭೆಗಳಿಗೆ ಪ್ರಚೋದನೆ ನೀಡುವ ರೀತಿಯಲ್ಲಿ ಅಪರಾಧಿಗಳಿದ್ದರು ಎಫ್.ಐ.ಆರ್ ದಲ್ಲಿ ನಮೊದಿಸಿದ 7 ಜನರಲ್ಲಿ ಕೇವಲ ಇಬ್ಬರನ್ನು ಬಂಧಿಸಿದ್ದು ಉಳಿದವರು ಬೇಕಾ ಬಿಟ್ಟಿಯಾಗಿ ಸಾರ್ವಜನಿಕವಾಗಿ ವಾತನಾಡುತ್ತಾ ಕಾನೂನನ್ನೆ ಪ್ರಶ್ನಿಸುವ ಮಟ್ಟದಲ್ಲಿದ್ದಾರೆ. ಇವರ ಬಂಧನ ಯಾವಾಗ ಎಂದು ಪ್ರಶ್ನಿಸಿದರು. ಇವರನ್ನು ತಕ್ಷಣ ಬಂಧಿಸಬೇಕು. ಈ ಪ್ರಕರಣದಲ್ಲಿ ಬೆಳಗಾವಿ ನಗರದಲ್ಲಿರುವ ಕೆಲ ಸ್ವಯಂ ಘೋಷಿತ ನಾಯಕರ ವ್ಯವಸ್ಥಿತವಾದ ಜಾಲ, ಅಪರಾಧಿಗೆ ಇಂತಹ ಕುಕೃತ್ಯಕ್ಕೆ ಸಂಪೂರ್ಣವಾಗಿ ಸಹಾಯಮಾಡಿ ಅಪರಾಧಿಗಳ ರಕ್ಷಣೆಯಲ್ಲಿ ತೊಡಗಿದ್ದಾರೆ. ಅವರ ಮೇಲೆ ಪ್ರಕರಣ ದಾಖಲಿಸಬೇಕು ಎಂದರು.

ರಾಜ್ಯ ಬಿಜೆಪಿ ಮಾಧ್ಯಮ ಸಮಿತಿ ಸದಸ್ಯ ಎಫ್.ಎಸ್.ಸಿದ್ದನಗೌಡರ ಮಾತನಾಡಿ, ಇದೊಂದು ಆಧುನಿಕ ಕಾಲದಲ್ಲಿ ನಾಗರಿಕ ಸಮಾಜ ತಲೆ ತಗ್ಗಿಸುವಂತಾಹ ಪ್ರಕರಣವಾಗಿದ್ದು, ಮುನವಳ್ಳಿ ಪಟ್ಟಣದಲ್ಲಿ ಈ ಪ್ರಕರಣದಲ್ಲಿರುವ ಅಪರಾಧಿ ಇನ್ನು ಇಂತಹ ಹೀನ ಕೆಲಸಗಳಲ್ಲಿ ಭಾಗಿಯಾಗಿರುವ ಶಂಕೆಇದ್ದು ಅಲ್ಲದೆ ಕಾನುನು ಬಾಹಿರ ಅಕ್ರಮ ಚಟುವಟಿಕೆಗಳಲ್ಲಿ ಈ ಗ್ಯಾಂಗ್ ಭಾಗಿಯಾಗಿದ್ದು ಮಟ್ಕಾ ದಂಧೆ, ದೇಶಿ ಸರಾಯಿ ಮಾರಾಟ, ಗೂಂಡಾಗಿರಿ, ಹಿಂದೂ ಹೆಣ್ಣುಮಕ್ಕಳನ್ನ ಲೈಂಗಿಕವಾಗಿ ಬಳಸಿಕೊಂಡು ಅವರ ಮನೆಯವರಿಗೆ ಧಮಕ್ಕಿ ನೀಡಿ ಕೊಲೆ ಬೆದರಿಕೆ ಹಾಕೂವ ಕ್ರೂರಿತನದ ವರ್ತನೆ ಬೆಳೆಸಿಕೊಂಡಿದ್ದು ಗೂಂಡಾಗಳ ಗ್ಯಾಂಗ್ ಹೊಂದಿದ್ದಾನೆ ಎಂಬ ಆಪಾದನೆ ರಫೀಕ್ ಬೇಫಾರಿ ಇತನ ಹಾಗೂ ಇತನ ಗ್ಯಾಂಗ್ ಮೇಲೆಇದ್ದು ಇದರ ಹಿಂದೆ ಜೀಹಾದಿ ಮನಸ್ಥಿತಿಯ ಜನರು ಕಾರ್ಯನಿರ್ವಹಿಸುತಿದ್ದಾರೆ ಎಂಬ ಭಯ ಜನಸಾಮಾನ್ಯರಲ್ಲಿದ್ದು, ಇದರ ಬೇರು ಸಮೇತ ಕಿತ್ತುಹಾಕಲು ಮತ್ತು ಇವರ ಚಟುವಟಿಕೆ ತಿಳಿಯಲು ಉನ್ನತ ತನಿಖೆ ಅತ್ಯವಶ್ಯಕವಾಗಿದೆ. ಆದ್ದರಿಂದ ಈ ಅಪರಾಧವನ್ನು ಹಗುರವಾಗಿ ಪರಿಗಣಿಸದೆ ಇದರ ಜಾಲವನ್ನು ಕಂಡು ಹಿಡಿದು ಸಮಾಜಘಾತುಕ ಶಕ್ತಿಯುನ್ನು ಮಟ್ಟಾಹಾಕವಂತೆ ಭಾರತೀಯು ಜನತಾ ಪಾರ್ಟಿ ತಮ್ಮಲ್ಲಿ ಆಗ್ರಹಮಾಡುತ್ತೆವೆ ಎಂದು ತಿಳಿಸಿದರು.

ಈ ವಿಷಯವನ್ನು ಗೃಹಮಂತ್ರಿಗಳು ಕರ್ನಾಟಕ ಸರ್ಕಾರ ಪೋಲಿಸ್ ಮಹಾನಿರಿಕ್ಷಕರು ಕರ್ನಾಟಕ ಸರ್ಕಾರ ಇವರ ಗಮನಕ್ಕೆ ತರುವದಾಗಿ ಜಿಲ್ಲಾ ಬಿಜೆಪಿ ಎಸ್ಸಿ ಮೊರ್ಚಾ ಅಧ್ಯಕ್ಷ ಯಲ್ಲೇಶ ಕೊಲಕಾರ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಜಿಲ್ಲಾ ಕೋಶಾಧ್ಯಕ್ಷ ಮಲ್ಲಿಕಾರ್ಜುನ ಮಾದಮ್ಮನವರ, ಜಿಲ್ಲಾ ಸಾಮಾಜಿಕ ಜಾಲತಾಣದ ಸಂಚಾಲಕ ಸಂತೋಷ ದೇಶನೂರ, ಬಿಜೆಪಿ ಮುಖಂಡರಾದ ಮಂಜುನಾಥ ಪಮ್ಮಾರ, ಬಾಳೇಶ ಚವೌನ್ನವರ ಇದ್ದರು.

# ದಕ್ಷಿಣ ಕಾಶಿ ಕಾಲಕಾಲೇಶ್ವರ ಅದ್ದೂರಿ ರಥೋತ್ಸವ

ಗಜೇಂದ್ರಗಡ: ಜಿಲ್ಲೆಯ ಗಜೇಂದ್ರಗಡ ಸಮೀಪದ ದಕ್ಷಿಣ ಕಾಶಿ ಪ್ರಸಿದ್ಧಿಯ ಕಾಲಕಾಲೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಅಪಾರ ಭಕ್ತ ಜನಸ್ತೋಮದ ಮಧ್ಯೆ ಮಂಗಳವಾರ ಮಹಾರಥೋತ್ಸವ ಅದ್ದೂರಿಯಿಂದ ನೆರವೇರಿತು.ಅಪಾರ ಸಂಖ್ಯೆಯಲ್ಲಿ ಸೇರಿದ್ದ ಭಕ್ತರು ರಥವನ್ನು ಎಳೆದು ಪುನೀತರಾದರು.ರಥಕ್ಕೆ ಉತ್ತತ್ತಿ, ಬಾಳೆಹಣ್ಣು ಎಸೆದು ತಮ್ಮ ಇಷ್ಟಾರ್ಥಗಳು ನೆರವೇರಿಸು ಎಂದು ಪ್ರಾರ್ಥಿಸಿದರು. ಜಾತ್ರಾ ಮಹೋತ್ಸವದ ಪ್ರಯುಕ್ತ ಬೆಳಿಗ್ಗೆ ಕಾಲಕಾಲೇಶ್ವರ ದೇಗುಲದಲ್ಲಿ ಅಭಿಷೇಕ, ವಿಶೇಷ ಪೂಜಾ ಕೈಂಕರ್ಯಗಳು ನಡೆದವು.



# ಡಾ. ರಾಜ್‌ಕುಮಾರ್ ಅವರ ಜನ್ಮದಿನಾಚರಣೆ



ಗದಗ ಏಪ್ರಿಲ್ 24; ಜಿಲ್ಲಾಡಳಿತ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಕರ್ನಾಟಕ ರತ್ನ ಡಾ.ರಾಜ್ ಕುಮಾರ್ ಅವರ ಜನ್ಮ ದಿನಾಚರಣೆಯನ್ನು ಗದಗ ನಗರ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಬುಧವಾರ ಸರಳವಾಗಿ ಆಚರಿಸಲಾಯಿತು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿ.ಪಂ.ಸಿಇಒ ಎಸ್.ಭರತ್ ಅವರು ಡಾ.ರಾಜ್‌ಕುಮಾರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಗೌರವ ನಮನ ಸಲ್ಲಿಸಿದರು. ಡಾ.ರಾಜ್ ಕುಮಾರ್ ಅಭಿಮಾನಗಳು ಇದ್ದರು.

# ಕೊಲೆ ಆರೋಪಿ ಫಯಾಜ್‌ನನ್ನು ಗಲಗೇರಿಸುವಂತೆ ಬಿಜೆಪಿಯಿಂದ ಪ್ರತಿಭಟನೆ



ಅಣ್ಣಿಗೇರಿ.: ಹುಬ್ಬಳ್ಳಿಯಲ್ಲಿ ನಡೆದ ಸ್ನೇಹ ಹಿರೇಮಠ ಅವರ ಕೊಲೆಯನ್ನು ಖಂಡಿಸಿ ಭಾರತೀಯ ಜನತಾ ಪಾರ್ಟಿ ಅಣ್ಣಿಗೇರಿ ನಗರ ಘಟಕ ವತಿಯಿಂದ ಅಣ್ಣಿಗೇರಿಯು ಅಮೃತೇಶ್ವರ ದೇವಸ್ಥಾನದಿಂದ ವೀರರಾಣಿ ಕಿತ್ತೂರು ಚೆನ್ನಮ್ಮ ಸರ್ಕಲ್ ವರೆಗೆ ಕಾಂಗ್ರೆಸ್ ಸರ್ಕಾರದ ವಿರುದ್ಧ ಧಿಕ್ಕಾರ ಕೂಗುತ್ತಾ ಪ್ರತಿಭಟನೆ ನಡೆಸಿ ಆರೋಪಿಯನ್ನು ತಕ್ಷಣವೇ ಗಲ್ಲಿಗೆ ಹಾಕುವಂತೆ ಅಣ್ಣಿಗೇರಿ ಗಂಡಾಧಿಕಾರಿಗಳ ಮೂಲಕ ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಮಾಜಿ ಬಿಜೆಪಿ ರಾಜ ರೈತ ಮೋರ್ಚಾ ಷಣ್ಮುಖ ಗುರಿಕಾರ್ ಮಾತನಾಡಿ. ಕಿವುಡು ಸರಕಾರ ಯಾವುದಾದರೂ ಇದ್ದರೆ ಅದು ಕಾಂಗ್ರೆಸ್ ಸರ್ಕಾರ ಲಜ್ಜೆ ಗೆಟ್ಟ ಸರಕಾರ ಎಂದು ಹೇಳಿದರು ಮತ್ತು ಇನ್ನು ಹಲವಾರು ಸಂಘದ ಸದಸ್ಯರು ಮಾತನಾಡಿ ತಕ್ಷಣವೇ ಆರೋಪಿಯನ್ನು ಏನ್ ಕೌಂಟರ್ ಮಾಡಬೇಕು ಎಂದು ಹೇಳಿದರು.

ಇನ್ನು ಈ ಸಂದರ್ಭ ದಲ್ಲಿ ಬಿಜೆಪಿ ರಾಜ್ಯ ರೈತ ಮೋರ್ಚ ಉಪಾಧ್ಯಕ್ಷ ಷಣ್ಮುಖ ಗುರಿಕಾರ್ ಬಿಜೆಪಿ ಎಸ್ ಸಿ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿರಾಘವೇಂದ್ರ ರಾಮಗಿರಿ ಜಿಲ್ಲಾ ರೈತ ಮೋರ್ಚಾ ಕಾರ್ಯದರ್ಶಿ ಬಸವರಾಜ್ ಯಳವತ್ತಿ ) ಅಣ್ಣಿಗೇರಿ ನಗರ ಘಟಕ ಅಧ್ಯಕ್ಷರಾದ ಶಿವಾನಂದ ಹೊಸಳ್ಳಿ ಇನ್ನು ಹಲವಾರು ಕಾರ್ಯ ಕರ್ತರು ಈ ಪ್ರತಿಭ 'ಟನೆಯಲ್ಲಿ ಪಾಲ್ಗೊಂಡಿದ್ದರು.

## ಮಹಿಳೆ ವಿವಸ್ತ್ರಗೊಳಿಸಿ ಹಲ್ಲೆ: ಜೈಲಿನಿಂದ ಬಿಡುಗಡೆಯಾದ ಆರೋಪಿಗಳಿಗೆ ಹೂಮಾಲೆ ಹಾಕಿ ಸ್ವಾಗತ

ಬೆಳಗಾವಿ: ಬೆಳಗಾವಿ ತಾಲೂಕಿನ ಹೊಸ ವಂಟಮೂರಿಯಲ್ಲಿ ಮಹಿಳೆ ವಿವಸ್ತ್ರಗೊಳಿಸಿ ಥಳಿಸಿದ ಪ್ರಕರಣದ ಆರೋಪಿಗಳಿಗೆ ಹೈಕೋರ್ಟ್ ಷರತ್ತುಬದ್ಧ ಜಾಮೀನು ನೀಡಿದೆ. ಜೈಲಿನಿಂದ ಹೊರಬಂದ ಆರೋಪಿಗಳನ್ನು ಅದ್ದೂರಿಯಾಗಿ ಸ್ವಾಗತಿಸಿರುವ ವಿಡಿಯೋ ವೈರಲ್ ಆಗಿದೆ

ಪ್ರಕರಣದ ಪ್ರಮುಖ ಆರೋಪಿಯಾಗಿರುವ ಬಸಪ್ಪ ನಾಯಕ್ ಹಿಂಡಲಗಾ ಜೈಲಿನಿಂದ ಬಿಡುಗಡೆಯಾಗಿ ಹೊರಗೆ ಬರುವ ವೇಳೆ ಹೂಹಾರ ಹಾಕಿ ಸ್ವಾಗತ ಮಾಡಿದ್ದಾರೆ. ಆರೋಪಿ ಜೈಲಿನಿಂದ ಹೊರ ಬಂದಾಗ ಹೂಹಾರವನ್ನು ಹಾಕಿ, ಅದ್ದೂರಿಯಾಗಿ ಸ್ವಾಗತ ಮಾಡಲಾಗಿದೆ. ಆರೋಪಿಗೆ ಹೂಹಾರ ಹಾಕಿ ವಿವಿಧ ಹಾಡುಗಳನ್ನು ಎಡಿಟ್ ಮಾಡಿ ವಿಡಿಯೋವನ್ನು ಸಾಮಾಜಿಕ ಜಾಲತಾಣದಲ್ಲಿ ಹರಿಯಬಿಡಲಾಗಿದೆ. ಈ ವಿಡಿಯೋ ಎಲ್ಲೆಡೆ ವೈರಲ್ ಆಗಿದೆ. ಪಟಾಕಿ ಹಾಗೂ ಸಿಹಿ ಹಂಚಿ ಆರೋಪಿಗಳ ಬಿಡುಗಡೆಯನ್ನು ಸಂಭ್ರಮವಾಗಿ ಆಚರಿಸಲಾಗಿದೆ.

ವಂಟಮೂರಿ ಗ್ರಾಮದಲ್ಲಿ ಪ್ರೀತಿಯ ವಿಚಾರವಾಗಿ ಮಹಿಳೆಯನ್ನು ವಿವಸ್ತ್ರಗೊಳಿಸಿ, ಮೆರವಣಿಗೆ ಮಾಡಿ ಬಳಿಕ ಕಂಬಕ್ಕೆ ಕಟ್ಟಿ ಹಾಕಿ ಹಲ್ಲೆ ನಡೆಸಲಾಗಿತ್ತು. ಈ ಪ್ರಕರಣ ಸಂಬಂಧ 13 ಜನ ಆರೋಪಿಗಳನ್ನು ಕಾಕತಿ ಪೊಲೀಸರು ಬಂಧಿಸಿದ್ದರು. ಹೈಕೋರ್ಟ್ ಎಲ್ಲ ಆರೋಪಿಗಳಿಗೆ ಷರತ್ತುಬದ್ಧ ಜಾಮೀನು ನೀಡಿದೆ. ಹೀಗಾಗಿ ಆರೋಪಿಗಳು ಸೋಮವಾರ (ಏ.22) ರಾತ್ರಿ ಜೈಲಿನಿಂದ ಬಿಡುಗಡೆಯಾದರು.

## ಧಾರವಾಡ ಪ್ರಾದೇಶಿಕ ವಿಭಾಗಕ್ಕೆ ನಿರ್ದೇಶಕರಾಗಿ ಶ್ರೀಮತಿ ದಯಾಶೀಲ ಅಧಿಕಾರ ಸ್ವೀಕಾರ

ಬೆಳಗಾವಿ: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಧಾರವಾಡ ಪ್ರಾದೇಶಿಕ ವಿಭಾಗಕ್ಕೆ ಬೆಳ್ತಂಗಡಿ ಮೂಲದ ಶ್ರೀಮತಿ



ದಯಾಶೀಲರವರು ಧರ್ಮಸ್ಥಳದ ಪೂಜ್ಯ ವೀರೇಂದ್ರ ಹೆಗಡೆಯವರ ಆಶೀರ್ವಾದದೊಂದಿಗೆ ಯೋಜನೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಡಾ. ಎಲ್ ಎಚ್ ಮಂಜುನಾಥ್ ಮತ್ತು ಮುಖ್ಯ ನಿರ್ವಹಣಾಧಿಕಾರಿಗಳಾದ ಶ್ರೀ ಅನಿಲ್ ಕುಮಾರ್ ಎಸ್ ಎಸ್ ರವರ ಆದೇಶದಂತೆ ಕರ್ತವ್ಯಕ್ಕೆ ಹಾಜರಾಗಿದ್ದಾರೆ, ಸದ್ರಿಯವರು ಸುಮಾರು 29 ವರ್ಷಗಳಿಂದ ರಾಜ್ಯದ ಬೇರೆ ಬೇರೆ ಕಡೆಗಳಲ್ಲಿ ಸೇವೆಯನ್ನು ನೀಡಿ ದವರಾಗಿದ್ದು ಸದ್ರಿ ಅವರಿಗೆ ಯೋಜನಾ ಅನುಕೂಲಕ್ಕಾಗಿ ನಿರ್ಮಾಣವಾದ ಅಥಣಿ, ಬೆಳಗಾಂ 2, ಚಿಕ್ಕೋಡಿ, ಬೆಳಗಾಂ1, ಧಾರವಾಡ, ಹಾವೇರಿ ಜಿಲ್ಲೆಗಳನ್ನು ಒಳಗೊಂಡ 36 ತಾಲೂಕು ಯೋಜನಾ ವ್ಯಾಪ್ತಿಯುನ್ನೊಳಗೊಂಡಿದೆ. ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ವಸಂತ ಸಾಲಿಯನ್ ರವರು ಕೇಂದ್ರ ಕಚೇರಿ ಧರ್ಮಸ್ಥಳಕ್ಕೆ ವರ್ಗಾವಣೆಗೊಂಡಿದ್ದಾರೆ.

# ವೀರಗಾಸೆ, ಜಾನಪದ ನೃತ್ಯ, ಸಸಿ ನೆಡುವ,ಮೂಲಕ ಮತದಾನ ಜಾಗೃತಿ ಕಾರ್ಯಕ್ರಮ



ಶಿರಹಟ್ಟಿ: ತಾಲೂಕಿನ ಮಾಗಡಿ ಗ್ರಾಮ ಪಂಚಾಯತ್ ನಲ್ಲಿ ಪಂಚಾಯತ್ ರಾಜ್ ದಿವಸ ಪ್ರಯುಕ್ತ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಅಡಿಯಲ್ಲಿ ವಲಸೆ ಯಾಕ್ರಿ ನಮ್ಮೂರಲ್ಲೇ ಉದ್ಯೋಗ ಖಾತ್ರಿ.ಅಭಿಯಾನದ ಮೂಲಕ ನರೇಗಾ ಕೂಲಿಕಾರ್ಮಿಕರಿಗೆ ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ಹಮ್ಮಿಕೊಂಡು 812 ನರೇಗಾ ಕೂಲಿ ಕಾರ್ಮಿಕರಿಗೆ ವೀರಗಾಸೆ, ಜಾನಪದ ನೃತ್ಯ, ಸಸಿ ನೆಡುವ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ತಾಲೂಕು ಪಂಚಾಯತ್ನ ಕಾರ್ಯನಿರ್ವಾಹಕ ಅಧಿಕಾರಿ ಪ್ರಶಾಂತ್ ರಾವ್ ಎಂವಿ, ತಾಲೂಕು ಯೋಜನಾಧಿಕಾರಿ ಎಚ್ ಎ ಕೊಂಡಿಕೊಪ್ಪ, ಸಹಾಯಕ ನಿರ್ದೇಶಕ (ಗ್ರಾಮೀಣ ಉದ್ಯೋಗ) ಶಿವಕುಮಾರ್ ಕೆ ವಾಲಿ, ಪಿಡಿಓ , ಡಿ ಐ ಇ ಸಿ, ಟಿ ಐ ಇ ಸಿ, ಟಿ ಎ ಇ,ಕಾರ್ಯದರ್ಶಿ, ಬಿಲ್ ಕಲೆಕ್ಟರ್, ಬಿ ಎಫ್ ಟಿ, ಜಿಕೆಎಂ ಗ್ರಾಮ ಪಂಚಾಯತಿ ಸಿಬ್ಬಂದಿ ಮೇಟ್ ಗಳು ನರೇಗಾ ಕೂಲಿಕಾರ್ಮಿಕರು ಭಾಗವಹಿಸಿದ್ದರು.

# ಚುನಾವಣಾ ಖರ್ಚು–ವೆಚ್ಚಗಳ ಲೆಕ್ಕ ಪತ್ರಗಳ ಪರಿಶೀಲನಾ ಸಭೆ ನಿಗದಿ

ಕೊಪ್ಪಳ, ಏಪ್ರಿಲ್ 24 : ಲೋಕಸಭಾ ಚುನಾವಣೆ–2024ರ ಹಿನ್ನೆಲೆಯಲ್ಲಿ ಚುನಾವಣಾ ಖರ್ಚು–ವೆಚ್ಚಗಳ ಲೆಕ್ಕ ಪತ್ರಗಳ ಪರಿಶೀಲನಾ ಸಭೆಯನ್ನು ಏಪ್ರಿಲ್ 26 ಮತ್ತು 30 ಹಾಗೂ ಮೇ 4ಕ್ಕೆ ನಗದಿಪಡಿಸಲಾಗಿದೆ.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಚುನಾವಣಾ ಸಮಯದಲ್ಲಿ ಅಭ್ಯರ್ಥಿಗಳ ಚುನಾವಣಾ ಖರ್ಚು–ವೆಚ್ಚಗಳ ಲೆಕ್ಕ ಪತ್ರಗಳನ್ನು ಚುನಾವಣಾ ವೆಚ್ಚ ವೀಕ್ಷಕರು ಪರಿಶೀಲಿಸುವ ಸಲುವಾಗಿ ಮೂರು ಬಾರಿ ದಿನಾಂಕಗಳನ್ನು ನಗದಿಪಡಿಸಿ ಸಭೆಗಳನ್ನು ನಡೆಸಿ ಪರಿಶೀಲನೆ ಮಾಡಬೇಕಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸಂಬಂಧಿಸಿದ ಚುನಾವಣಾ ಅಭ್ಯರ್ಥಿಗಳು/ ಅಭ್ಯರ್ಥಿಗಳ ಏಜೆಂಟರುಗಳು ನಾಮಪತ್ರ ಸಲ್ಲಿಸಿದ ದಿನಾಂಕದಿಂದ ಮಾಡುವ ವೆಚ್ಚಗಳಿಗೆ ಸಂಬಂಧಿಸಿದಂತೆ ಭರಿಸಲಾದ ಚುನಾವಣಾ ವೆಚ್ಚಕ್ಕೆ ಸಂಬಂಧಿಸಿದ ವಿವರಗಳನ್ನು ಪಾರ್ಟ್–ಎ (ಡೇ ಟು ಡೇ ರಿಜಿಸ್ಟರ್),

ಪಾರ್ಟ್–ಬಿ (ಕ್ಯಾಶ್ ರಿಜಿಸ್ಟರ್), ಪಾರ್ಟ್–ಸಿ (ಬ್ಯಾಂಕ್ ರಿಜಿಸ್ಟರ್)ನಲ್ಲಿ ನಮೂದಿಸಿ ಸಂಬಂಧಿಸಿದ ವೋಚರ್ ಅಥವಾ ರಶೀದಿಗಳೊಂದಿಗೆ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿಯೊಂದಿಗೆ ಹಾಗೂ ಚುನಾವಣೆಗೆ ಸಂಬಂಧಿಸಿದ ಅನುಮತಿ ಪಡೆದ ಆದೇಶ ಪ್ರತಿಗಳೊಂದಿಗೆ ಏ.26 ಮತ್ತು 30 ಹಾಗೂ ಮೇ 4ರ ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಆಡಿಟೋರಿಯಂ ಸಭಾಂಗಣದಲ್ಲಿ ಕಡ್ಡಾಯವಾಗಿ ಹಾಜರಾಗುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳೆಯರ ಸಂಕಷ್ಟ ಪರಿಹರಿಸಿದ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

ಬೆಳಗಾವಿ: ಮಹಿಳೆಯರ ಸಂಕಷ್ಟ ಅರಿತು ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಅವರ ಕಣ್ಣೀರು ಒರೆಸುವ ಕಾರ್ಯ ಮಾಡಿದ್ದು, ಮಹಿಳೆಯರು ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವ ಮೂಲಕ ನನಗೆ ಮತ ನೀಡಬೇಕು ಎಂದು ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಹೇಳಿದರು.

ಹುಕ್ಕೇರಿ ವಿಧಾನಸಭಾ ಮತಕ್ಷೇತ್ರದ ಕಣಗಲಾ, ಸಂಕೇಶ್ವರ, ಅಮ್ಮಣ್ಣಗಿಯಲ್ಲಿ ಕೈಗೊಂಡ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿ, ಈ ಲೋಕಸಭಾ ಚುನಾವಣೆಯಲ್ಲಿ ಮತದಾರರ ಪಾತ್ರ ದೊಡ್ಡದಿದ್ದು, ಕಾಂಗ್ರೆಸ್ ಪಕ್ಷ ಪುರುಷರಿಗೆ ಮಾತ್ರವಲ್ಲದೇ ಮಹಿಳೆಯರಿಗೂ ಟಿಕೆಟ್ ನೀಡಿ ಮಹಿಳೆಯರ ಪರವಾಗಿ ನಿಂತಿದೆ. ಹೀಗಾಗಿ ಈ ಬಾರಿ ಹೆಚ್ಚಿನ ಸಂಖ್ಯೆಯಲ್ಲಿ ನನಗೆ ಮತದಾನ ನೀಡಿ ಕ್ಷೇತ್ರದ ಅಭಿವೃದ್ದಿಗೆ ನನಗೆ ಆಶೀರ್ವಾದ ಮಾಡಬೇಕು ಎಂದು ಮತದಾರರಲ್ಲಿ ಮನವಿ ಮಾಡಿದರು.

ಬಡವರು ಸ್ವಾಭಿಮಾನದಿಂದ ಬದುಕು ನಡೆಸಬೇಕು ಎಂಬ ಉದ್ದೇಶದಿಂದ ರಾಜ್ಯ ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದು, ಈ ಯೋಜನೆಗಳು ಬಡವರ ಬದುಕಿಗೆ ನೆಮ್ಮದಿಯನ್ನು ತಂದಿದೆ. ಸಂವಿಧಾನದ ಆಶಯಗಳು ಜಾರಿಯಾಗಬೇಕಾದರೆ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕು. ಕಾಂಗ್ರೆಸ್ ಪಕ್ಷ ಜನರ ಮೂಲಭೂತ ಹಕ್ಕುಗಳನ್ನು ರಕ್ಷಿಸುವ ಪರವಾಗಿ ಇದೆ. ಆದರೆ, ಬಿಜೆಪಿಗೆ ಸಂವಿಧಾನದ ಬಗ್ಗೆ ಯಾವುದೇ ಕಾಳಜಿ ಇಲ್ಲ ಎಂದು ಟೀಕಿಸಿದರು.

ರಾಜಕಾರಣದ ಮೂಲಕ ಸಮಾಜ ಸೇವೆ ಮಾಡುವುದರ ಜೊತೆಗೆ



ಶಿಕ್ಷಣ, ಕ್ರೀಡೆ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸಾಧನೆಗೈಯಲು ಬಯಸುವ ಯುವಕರಿಗೆ ತಮ್ಮ ಫೌಂಡೇಷನ್ ಮೂಲಕ ಸಹಾಯ ಸಹಕಾರ ನೀಡುವ ನಮ್ಮ ತಂದೆ ಸತೀಶ ಜಾರಕಿಹೊಳಿ ಅವರು ನನಗೆ ಆದರ್ಶ. ಅವರ ದಾರಿಯಲ್ಲೇ ನಡೆದು ಮತಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತೇನೆ. ನಮ್ಮ ಮನೆಯ ಮಗಳಾದ ನನಗೂ ಸಹ ನಮ್ಮ ತಂದೆಯವರಿಗೆ ನೀಡಿದ ಬೆಂಬಲ, ಅಭಿಮಾನವನ್ನು ನೀಡಿ ಎಂದ ಅವರು, ಕಳೆದ 15 ವರ್ಷದಿಂದ ರಾಜಕೀಯದಲ್ಲಿ ಸಕ್ರಿಯರಾಗಿರುವ ತಂದೆ ಸತೀಶ ಜಾರಕಿಹೊಳಿ ಅವರು ತಮ್ಮ ಮತಕ್ಷೇತ್ರದ ಗ್ರಾಮಗಳಲ್ಲಿ ಬೇಡಿಕೆಗೆ ಅನುಗುಣವಾಗಿ ಶಾಲಾ ಕಾಲೇಜುಗಳನ್ನು ನಿರ್ಮಿಸಿ ಶೈಕ್ಷಣಿಕ ಪ್ರಗತಿಗೆ ಶ್ರಮಿಸಿದ್ದಾರೆ. ನನಗೂ ಇದೇ ರೀತಿಯಲ್ಲಿ ಜನರ ಸೇವೆ ಮಾಡುವ ಬಯಕೆಯಿದೆ. ಆದ್ದರಿಂದ ಮತದಾರರು ನನಗೆ ಮತ ನೀಡಬೇಕು ಎಂದು ಮನವಿ ಮಾಡಿದರು.

ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಒಂಬತ್ತು ತಿಂಗಳ ಒಳಗೆ ಐದು ಗ್ಯಾರಂಟಿ ಯೋಜನೆಗಳನ್ನು ಈಡೇರಿಸಿದೆ. ಪ್ರತಿಯೊಂದು ಕುಟುಂಬಗಳಿಗೆ ನಾಲ್ಕರಿಂದ ಐದು ಸಾವಿರ ಹಣ ಉಳಿತಾಯವಾಗುತ್ತಿದೆ. ಗೃಹಲಕ್ಷ್ಮಿ ಯೋಜನೆಯಿಂದ ಪ್ರತಿಯೊಂದು ಮನೆಯ ಗೃಹಿಣಿಯರು 2000 ಪಡೆದುಕೊಳ್ಳುತ್ತಿದ್ದಾರೆ. ವಿದ್ಯುತ್ ಅನ್ನು ಉಚಿತವಾಗಿ ಪಡೆದುಕೊಳ್ಳುತ್ತಿದ್ದಾರೆ. ಶಕ್ತಿ ಯೋಜನೆಯಡಿ ಉಚಿತವಾಗಿ ಮಹಿಳೆಯರು ಪ್ರಯಾಣ ಮಾಡುತ್ತಿದ್ದಾರೆ. ಅನ್ನಭಾಗ್ಯದಲ್ಲಿ 5 ಕೆಜಿ ಅಕ್ಕಿ 5 ಕೆ.ಜಿ ಗೆ ಹಣವನ್ನು ಪಡೆಯುತ್ತಿದ್ದಾರೆ. ಆದ್ದರಿಂದ ಈ ಭಾರಿ ಕ್ಷೇತ್ರ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಬೇಕು ಎಂದು ಮತದಾರರಲ್ಲಿ ಮನವಿ ಮಾಡಿದರು.

ಬಿಜೆಪಿ ಕೇಂದ್ರ ಹಾಗೂ ರಾಜ್ಯ ನಾಯಕರು ಸುಳ್ಳು ಭರವಸೆಗಳನ್ನು ನೀಡಿ ಜನರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ವರ್ಷಕ್ಕೆ 2 ಕೋಟಿ ಉದ್ಯೋಗ ನೀಡುತ್ತೇವೆ ಎಂದು ಅಧಿಕಾರ ಹಿಡಿದವರು. ಇಲ್ಲಿಯು ತನಕ ಒಂದು ಉದ್ಯೋಗವನ್ನು ಸೃಷ್ಟಿಸಿಲ್ಲ. ಆದ್ದರಿಂದ ಬಿಜೆಪಿಯ ಸುಳ್ಳು ಭರವಸೆಗಳಿಗೆ ನಂಬಿ ಮತ ಹಾಕದೆ ನುಡಿದಂತೆ ನಡೆದ ಕಾಂಗ್ರೆಸ್ ಬೆಂಬಲಿಸಬೇಕು. ಚುನಾವಣೆಯಲ್ಲಿ ನನ್ನನ್ನು ಆಯ್ಕೆ ಮಾಡಿದರೆ ಕ್ಷೇತ್ರದ ಅಭಿವೃದ್ಧಿಯ ಜೊತೆಗೆ ಕ್ಷೇತ್ರದ ಕಾರ್ಯಕರ್ತರ ಕಷ್ಟ ಸುಃಖಗಳಿಗೆ ಸದಾ ಭಾಗಿಯಾಗುವೆ. ಕಚೇರಿ ಹಂತದಲ್ಲಿ ಸಾರ್ವಜನಿಕರ ಕೆಲಸಗಳು ಸುಲಭವಾಗಿ ಆಗುವ ನಿಟ್ಟಿನಲ್ಲಿ ಕೆಲಸ ಮಾಡಲಾಗುವುದು. ಯಾವುದೇ ರೀತಿಯ ಭ್ರಷ್ಟಾಚಾರಕ್ಕೆ ಆಸ್ಪದ ನೀಡದೆ ಭ್ರಷ್ಟಾಚಾರ ಮುಕ್ತ ತಾಲೂಕಾಗಿಸಲು ಶ್ರಮಿಸುವುದಾಗಿ ತಿಳಿಸಿದರು.

ಈ ವೇಳೆ ಗ್ರಾಮಗಳಿಗೆ ಆಗಮಿಸಿದ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಮಹಿಳೆಯರು ಆರತಿ ಎತ್ತಿ, ಹೂ ಮಾಲೆ ಹಾಕುವ ಮೂಲಕ ಅದ್ದೂರಿ ಸ್ವಾಗತ ಕೋರಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಎ.ಬಿ.ಪಾಟೀಲ, ಶಶಿಕಾಂತ ನಾಯಿಕ, ಮುಖಂಡರಾದ ಜಯಪ್ರಕಾಶ ಕರಜಗಿ, ವಿನೋದ ನಾಯಿಕ, ದಿಲೀಪ್ ಹೊಸಮನಿ,ಚಿದಾನಂದ ಕರ್ದನ್ನವರ, ಪ್ರವೀಣ ನೇಸರಿ, ವಿಕ್ರಮ್ ಕರನಿಂಗ ತಬ್ರೇಜ್ ಹಜರತಭಾಯ್ ಮುಕ್ತಾರ್ ನದಾಫ್, ಮಹೇಶ ದವಡೆ, ಪ್ರಶಾಂತ ಕೋಳಿ, ಮಹೇಶ ಹೊಟ್ಟಿವಳಿ, ನಾರಾಯಣ ಕದಂ, ಕುಮಾರ ಕಬ್ಬೂರಿ, ರಿಜ್ವಾನ್ ರಾಂಪುರೆ ಮುಸ್ತಫಾ ಮಕಾಂದರ್ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26